# ಗಡಿಕನ್ನಡಿಗ

ಸಂಪಾದಕ:ಮುರುಗೇಶ ಬಿ.ಶಿವಪೂಜಿ

www.gadikannadiga.com

ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ,ಕೊಪ್ಪಳ,ಗದಗ, ವಿಜಯಪುರ, ವಿಜಯನಗರ ಬಳ್ಳಾರಿಗಳಿಂದ ಏಕಕಾಲಕ್ಕೆ ಪ್ರಕಟಿತ

ಸಂಪುಟ:22/ಸಂಚಿಕೆ:114 RNI NO.KAR KAN/2003/10452:No./PMG/KA/NK/BM/743/24-26 ಗುರುವಾರ ದಿನಾಂಕ: 28-03-2024 ಪುಟಗಳು: 6 ಬೆಲೆ:1 ರೂ ☎ 9480498694 / Email-mbshivapuji@gmail.com2


### ಮತದಾನ ಜಾಗೃತಿ ಕಾಲ್ನಡಿಗೆ ಜಾಥಾ

## ಶೇ.100 ರಷ್ಟು ಮತದಾನಕ್ಕೆ ಜಿಲ್ಲಾ ಚುನಾವಣಾಧಿಕಾರಿ ನಿತೇಶ್ ಪಾಟೀಲ ಮನವಿ

ಬೆಳಗಾವಿ, ಮಾ.27: ನಗರದ ಚನ್ನಮ್ಮ ವೃತ್ತದಲ್ಲಿ ಬುಧವಾರ (ಮಾ.27) ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಹಮ್ಮಿಕೊಂಡಿದ್ದ ಕಡ್ಡಾಯ ಮತದಾನ ಜಾಗೃತಿ ಕಾಲ್ನಡಿಗೆ ಜಾಥಾ ಕಾರ್ಯಕ್ರಮಕ್ಕೆ ಜಿಲ್ಲಾ ಚುನಾವಣಾಧಿಕಾರಿ ಆಗಿರುವ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಹಾಗೂ ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷರೂ ಆಗಿರುವ ಜಿಪಂ ಸಿಇಒ ರಾಹುಲ್ ಶಿಂಧೆ ಅವರು ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ಮಾತನಾಡಿ, ಲೋಕಸಭೆಯ ಸಾರ್ವತ್ರಿಕ ಚುನಾವಣೆಯಲ್ಲಿ ಎಲ್ಲ ಮತದಾರರು ಕಡ್ಡಾಯವಾಗಿ ಮತದಾನ ಮಾಡುವ ಮೂಲಕ ಶೇ.100 ರಷ್ಟು ಮತದಾನ ಪ್ರಮಾಣದ ಏರಿಕೆಗೆ ಸಹಕರಿಸಬೇಕು. ಈ ಜಾಥಾದ ಮೂಲಕ ಮತದಾನದ ಜಾಗೃತಿ ಆಗಬೇಕು ಎಂದರು.

ಜಿಪಂ ಸಿಇಒ ರಾಹುಲ್ ಶಿಂಧೆ ಅವರು ಮಾತನಾಡಿ, ಈಗಾಗಲೇ ಜಿಲ್ಲೆಯಾದ್ಯಂತ ಸ್ವೀಪ್ ಸಮಿತಿಯ ಮೂಲಕ ಮತದಾರರಲ್ಲಿ ಮತದಾನದ ಜಾಗೃತಿ ಮಾಡಲಾಗುತ್ತಿದೆ. ಅನೇಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಅದೇ ರೀತಿ ಈ ಕಾಲ್ನಡಿಗೆ ಜಾಥಾ ಹಮ್ಮಿಕೊಳ್ಳಲಾಗಿದೆ. ಎಲ್ಲ ಮತದಾರರು ಲೋಕಸಭೆ ಚುನಾವಣೆಯಲ್ಲಿ ಕಡ್ಡಾಯವಾಗಿ ಮತದಾನ ಮಾಡಬೇಕು ಎಂದು ಮನವಿ ಮಾಡಿದರು.

ಜಾಥಾ ಕಾರ್ಯಕ್ರಮವು ನಗರದ ಚನ್ನಮ್ಮ ವೃತ್ತದಲ್ಲಿ ಪ್ರಾರಂಭವಾಗಿ ಕಾಕತಿವೇಸ್ ರಸ್ತೆ, ಗಣಪತಿ ಗಲ್ಲಿ, ಮಾರುತಿ ಗಲ್ಲಿ,




ಕಿರ್ಲೋಸ್ಕರ್ ರಸ್ತೆ ಮೂಲಕ ಬೋಗಾರವೇಸ್ ವೃತ್ತದವರೆಗೆ ಜರುಗಿತು. ಬೋಗಾರವೇಸ್ ವೃತ್ತದಲ್ಲಿ ಕಡ್ಡಾಯ ಮತದಾನ ಜಾಗೃತಿ ಕುರಿತು ಪ್ರತಿಜ್ಞಾವಿಧಿ ಭೋಧಿಸಲಾಯಿತು.ಇದೇ ವೇಳೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವತಿಯಿಂದ ಯಕ್ಷಗಾನ ಕಲಾ ತಂಡಗಳು ಭಾಗವಹಿಸಿ, ಕಡ್ಡಾಯ ಮತದಾನ ಜಾಗೃತಿ ಕುರಿತು ನೃತ್ಯ ಹಾಗೂ ಡೊಳ್ಳು ಕುಣಿತದ ಮೂಲಕ ಸಾರ್ವಜನಕರಿಗೆ ಅರಿವು ಮೂಡಿಸಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಸುಮಾರು 400, ಮಹಾನಗರ ಪಾಲಿಕೆಯಿಂದ 500, ಯುವಸಬಲೀಕರಣ ಮತ್ತು ಕ್ರಿಡಾ ಇಲಾಖೆಯಿಂದ 200, ಬಿಸಿಎಮ್ ಹಾಸ್ಟೆಲ್ ಇಂದ 200 ವಿದ್ಯಾರ್ಥಿಗಳು, ಜಿಲ್ಲಾ ಪಂಚಾಯತ ಮತ್ತು ತಾಲ್ಲೂಕಾ ಪಂಚಾಯತ ಅಧಿಕಾರಿ/ಸಿಬ್ಬಂದಿಗಳು ಶಾಲಾ-ಕಾಲೇಜು ವಿದ್ಯಾರ್ಥಿಗಳು ದಾರಿ ಉದ್ದಕ್ಕು ಸಾರ್ವಜನಕರಿಗೆ ನಾಮಫಲಕ ಪ್ರದರ್ಶನ, ಕರಪತ್ರಗಳ ಹಂಚಿಕೆ ಹಾಗೂ ಆಟೋ ಪ್ರಚಾರ (ಜಿಂಗಲ್ಸ್)ಗಳ ಮೂಲಕ ಕಡ್ಡಾಯ ಮತದಾನ ಜಾಗೃತಿ ಕುರಿತು ವ್ಯಾಪಕ ಜಾಗೃತಿ ಮೂಡಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಯಾದ ಭಿಮಾಶಂಕರ ಗುಳೆದ, ಡಿ.ಸಿ.ಪಿ ಅಪರಾದ & ಸಂಚಾರ ಪಿ.ವಿ ಸ್ನೇಹ, ಜಿಲ್ಲಾ ಪಂಚಾಯತ ಯೋಜನಾ ನಿರ್ದೇಶಕರು ಹಾಗು ಜಿಲ್ಲಾ ಸ್ವೀಪ್ ನೋಡಲ್ ಅಧಿಕಾರಿ ಡಾ: ಎಮ್ ಕೃಷ್ಣರಾಜು, ಉಪಕಾರ್ಯದರ್ಶಿ ಆಡಳಿತ ಬಸವರಾಜ್ ಅಡವಿಮಠ, ಲೆಕ್ಕಾಧಿಕಾರಿಯಾದ ಗಂಗಾ ಹಿರೇಮಠ, ಮಹಾನಗರ ಪಾಲಿಕೆ ಆಯುಕ್ತರಾದ ಲೊಕೇಶ ಪಿ.ಎನ್. ಯುವಸಬಲಿ ೀಕರಣ ಮತ್ತು ಕ್ರಿಡಾ ಇಲಾಖೆ ಉಪ ನಿರ್ದೇಶಕರಾದ ಬಿ. ಶ್ರೀನಿವಾಸ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪ ನಿರ್ದೇಶಕಿ ವಿದ್ಯಾವತಿ ಭಜಂತ್ರಿ, ಮತ್ತಿತರು ಉಪಸ್ಥಿತರಿದ್ದರು.

### ಎಇಇ ದುರದುಂಡೇಶ್ವರ ಬನ್ನೂರ ಲೋಕಾಯುಕ್ತ ಬಲೆಗೆ

ಬೆಳಗಾವಿ: ನರೇಗಾ ಕಾಮಗಾರಿಯ ತಾಂತ್ರಿಕ ಅನುಮೋಧನೆ ನೀಡಲು ಗ್ರಾಪಂ ಸದಸ್ಯರಿಂದ 27.75 ಲಕ್ಷ ಲಂಚ ಪಡೆಯುತ್ತಿದ್ದ ಅಧಿಕಾರಿಯನ್ನು ಲೋಕಾಯುಕ್ತ ಅಧಿಕಾರಿಗಳು ಖೆಡ್ಡಾಗೆ ಬಿಳಿಸುವಲ್ಲಿ ಯಶಸ್ವಿಯಾಗಿದ್ದಾರೆ.ಹೌದು... ಖಾನಾಪುರದ ಪಂಚಾಯತ ರಾಜ್ ಇಂಜಿನಯರಿಂಗ್ ಉಪ ವಿಭಾಗದ ಎಇಇ ದುರದುಂಡೇಶ್ವರ ಬನ್ನೂರ ಈತ ಗ್ರಾಪಂ ಸದಸ್ಯರೊಬ್ಬರಿಂದ ನರೇಗಾ ಕಾಮಗಾರಿಯ ತಾಂತ್ರಿಕ ಅನುಮೋಧನೆ ನೀಡಲು 27.75 ಲಕ್ಷ ಲಂಚದ ಹಣಕ್ಕೆ ಬೇಡಿಕೆ ಇಟ್ಟಿದ್ದರು. ಆದರೆ ಈ ಕುರಿತು ಸದಸ್ಯರು ಲೋಕಾಯುಕ್ತ ಪೊಲೀಸರಿಗೆ ದೂರು ನೀಡಿದ್ದರು. ದೂರು ದಾಖಲಿಸಿಕೊಂಡ ಲೋಕಾಯುಕ್ತ ಪೊಲೀಸ್ ಠಾಣೆಯ ಅಧಿಕಾರಿಗಳು ಬನ್ನೂರು ಅವರು ವಾಸ ಇರುವ ಯಳ್ಳೂರು ಗ್ರಾಮದ ಮನೆಯ ಮೇಲೆ ದಾಳಿ ಮಾಡಿ ಮನೆಯಲ್ಲಿ ಲಂಚ ಪಡೆಯುತ್ತಿದ್ದಾ ಲೋಕಾಯುಕ್ತ ಅಧಿಕಾರಿಗಳು ದಾಳಿ ಮಾಡಿದ್ದಾರೆ.

### ವಿಶ್ವ ಕ್ಷಯರೋಗ ದಿನಾಚರಣೆ ಕಾರ್ಯಕ್ರಮ

## 2025 ಕ್ಕೆ ಕ್ಷಯರೋಗ ಮುಕ್ತ ಜಿಲ್ಲೆಯನ್ನಾಗಿಸುವುದು ನಮ್ಮೆಲ್ಲರ ಗುರಿ: ನಲಿನ್ ಅತುಲ್



ಕೊಪ್ಪಳ ಮಾರ್ಚ್ 27 : 2025 ಕ್ಕೆ ಕ್ಷಯರೋಗ ಮುಕ್ತ ಕೊಪ್ಪಳ ಜಿಲ್ಲೆಯನ್ನಾಗಿಸುವುದು ನಮ್ಮೆಲ್ಲರ ಗುರಿಯಾಗಿದ್ದು, ಈ ನಿಟ್ಟಿನಲ್ಲಿ ಆರೋಗ್ಯ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿಗಳಾದ ನಲಿನ್ ಅತುಲ್ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತಿ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಕ್ಷಯರೋಗ ನಿರ್ಮೂಲನಾ ಕೇಂದ್ರದ ವತಿಯಿಂದ ನಗರದ ಸಾಹಿತ್ಯ ಭವನದಲ್ಲಿ ಬುಧವಾರ ಹಮ್ಮಿಕೊಳ್ಳಲಾದ "ವಿಶ್ವ ಕ್ಷಯರೋಗ ದಿನಾಚರಣೆ-2024" ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕ್ಷಯರೋಗದ ನಿರ್ಮೂಲನೆ ಪ್ರತಿಯೊಬ್ಬರ ಜವಾಬ್ದಾರಿಯಾಗಿದ್ದು, ಕ್ಷಯರೋಗದ ಪತ್ತೆ ಹಾಗೂ ಚಿಕಿತ್ಸೆ ಬಗ್ಗೆ ಸಾರ್ವಜನಕರಿಗೆ ಸೂಕ್ತ ಅರಿವು ಮತ್ತು ಜಾಗೃತಿ ಮೂಡಿಸುವುದು ಅತ್ಯವಶ್ಯಕವಾಗಿದೆ. ಕ್ಷಯರೋಗವನ್ನು ಪ್ರಾಥಮಿಕ ಹಂತದಲ್ಲಿಯೇ ಪತ್ತೆ ಹಚ್ಚಿ ರೋಗಿಗೆ ಸೂಕ್ತ ಚಿಕಿತ್ಸೆ ನೀಡಬೇಕು. ಈ ಹಿನ್ನೆಲೆಯಲ್ಲಿ ರೋಗವನ್ನು ಒಬ್ಬರಿಂದ ಇನ್ನೊಬ್ಬರಿಗೆ ಹರಡದಂತೆ ತಡೆಗಟ್ಟಬಹುದು. (2 ನೇ ಪುಟಕ್ಕೆ)

### ಇಂದು ಅಗ್ನಿಬನ್ನಿರಾಯ ಜಯಂತಿ

ಗದಗ ಮಾರ್ಚ 27: ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಲೋಕಸಭೆ ಚುನಾವಣೆ-2024 ರ ನೀತಿ ಸಂಹಿತೆ ಹಿನ್ನಲೆಯಲ್ಲಿ ಶ್ರೀ ಅಗ್ನಿಬನ್ನಿರಾಯ ಜಯಂತಿಯನ್ನು ಮಾರ್ಚ 28 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಸರಳ ಹಾಗೂ ಸಾಂಕೇತಿಕವಾಗಿ ಆಚರಣೆ ಮಾಡಲಾಗುವುದು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



## ಜಗದೀಶ್ ಶೆಟ್ಟರ್ ಅವರು ಕರ್ಮ ಭೂಮಿಯನ್ನು ಬದಲಾಯಿಸುವದು ಸರಿಯಲ್ಲ :ರಾಜಕುಮಾರ ಟೋಪಣ್ಣವರ

ಬೆಳಗಾವಿ :ಮಾಜಿ ಸಿಎಂ ಜಗದೀಶ್ ಶೆಟ್ಟರ್ ಅವರ ಹತ್ತಿರ ಅಧಿಕಾರ ಇದ್ದಾಗ,ಅವರ ಜನ್ಮ ಭೂಮಿ,ಮತ್ತು ಕರ್ಮ ಭೂಮಿ ಒಂದೇ ಆಗಿತ್ತು, ಅಧಿಕಾರ ಕಳೆದುಕೊಂಡು ಹತಾಶರಾದ ಬಳಿಕ ಕರ್ಮ ಭೂಮಿಯನ್ನು ಬದಲಾಯಿಸುವದು ಸರಿಯಲ್ಲ. ಅಧಿಕಾರ ಇದ್ದಾಗ ಅವರು ಮಾಡಿದ ಕರ್ಮದ ಫಲ ಅವರ ಜನ್ಮ ಭೂಮಿಗೆ ಸಿಕ್ಕಿದೆ. ಅಧಿಕಾರ ಕಳೆದುಕೊಂಡ ಬಳಿಕ ಜನ್ಮ ಭೂಮಿಯಿಂದ ಪಲಾಯನ ಮಾಡುವದು ಜನ್ಮ ಭೂಮಿಗೆ ಮಾಡಿದ ದ್ರೋಹ ಎಂದು ರಾಜಕುಮಾರ ಟೋಪಣ್ಣವರ ಆರೋಪಿಸಿದ್ದಾರೆ. ಜಗದೀಶ್



ಶೆಟ್ಟರ್ ಅವರು ಮುಖ್ಯ ಮಂತ್ರಿಯಾ ಗಿದ್ದಾಗ ಬೆಳಗಾವಿ ಜಿಲ್ಲೆಗೆ ಅವರ ಕೊಡುಗೆ ಏನೂ ಇಲ್ಲ, ಬೆಳಗಾವಿಗೆ ಮಂಜೂರಾಗಿದ್ದ ಅನೇಕ ಕೇಂದ್ರದ ಯೋಜನೆ ಗಳನ್ನು ಪ್ರಲ್ಹಾದ್ ಜೋಶಿ,ಮತ್ತು ಜಗದೀಶ್ ಶೆಟ್ಟರ್ ಅವರು ಕೊಡಿಕೊಂಡು ಅನೇಕ ಯೋಜನೆಗಳನ್ನು ಬೆಳಗಾವಿ ಯಿಂದ ಹುಬ್ಬಳ್ಳಿಗೆ ಶಿಫ್ಟ್ ಮಾಡಿಸುವ ಮೂಲಕ ಕ್ರಾಂತಿಯ ಭೂಮಿ ಬೆಳ ಗಾವಿಗೆ ಮೋಸ,ಮತ್ತು ಅನ್ಯಾಯ ಮಾಡಿದ ಕೀರ್ತಿ ಜಗದೀಶ್ ಶೆಟ್ಟರ್ ಅವರಿಗೆ ಸಲ್ಲುತ್ತದೆ ಎಂದು ಟೋ ಪಣ್ಣವರ ಲೇವಡಿ ಮಾಡಿದ್ದಾರೆ. ಜಗದೀಶ್ ಶೆಟ್ಟರ್ ಅವರ ಜನ್ಮ ಭೂಮಿ ಧಾರವಾಡ-ಹುಬ್ಬಳ್ಳಿ ಯಲ್ಲೇ ತಮ್ಮ ಕರ್ಮದ ಫಲವನ್ನು ಕಳೆದುಕೊಂಡಿದ್ದಾರೆ. ಈಗ ಅವರು ಅವಳಿ ನಗರದಲ್ಲಿ ಕಳೆದುಕೊಂ ಡಿರುವ ಫಲವನ್ನು ಕುಂದಾ ನಗರಿಯಲ್ಲಿ ಹುಡುಕಿದ್ರೆ ಅವರಿಗೆ ಸಿಗಲು ಸಾಧ್ಯವೇ

(2 ನೇ ಪುಟಕ್ಕೆ)

## ಬೆಳಗಾವಿ ತಾಲೂಕಿನಲ್ಲಿ ಬೂತ ಮಟ್ಟದ ಕಾಂಗ್ರೆಸ್ ಕಾರ್ಯಕರ್ತರ ಸಭೆ

ಬೆಳಗಾವಿ: ಚಿಕ್ಕೋಡಿ ಲೋಕಸಭಾ ಕ್ಷೇತ್ರದಿಂದ ಗೆಲುವಾದರೆ ಸ್ವಸಹಾಯ ಸಂಘಟನೆಗಳುಗೆ ಬಲಪಡಿಸಲಾಗುವುದು. ಮಹಿಳೆಯರಿಗೆ ಅಗತ್ಯ ಸೌಲಭ್ಯ ಸೇರಿದಂತೆ, ಸಹಾಯ-ಸಹಕಾರ ನೀಡಲಾಗುವುದು ಎಂದು ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಅವರು ಹೇಳಿದರು.

ಚಿಕ್ಕೋಡಿ ಲೋಕಸಭೆ ಚುನಾವಣೆಯ ಹಿನ್ನೆಲೆಯಲ್ಲಿ ಬೆಳಗಾವಿ ತಾಲೂಕಿನ ಕಲಖಾಂಬ, ಮುಚ್ಚಂಡಿ, ಅಷ್ಟೆ ಗ್ರಾಮದಲ್ಲಿ ಬೂತ ಮಟ್ಟದ ಕಾಂಗ್ರೆಸ್ ಕಾರ್ಯಕರ್ತರ ಸಭೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.



ತಂದೆಯವರಾದ ಸಚಿವ ಸತೀಶ್ ಜಾರಕಿಹೊಳಿ ಅವರ ಕ್ಷೇತ್ರದವಾದರಿಂದ ಈ ಭಾಗದ ಜನತೆ ಮೇಲೆ ಅಪಾರ ನಂಬಿಕೆ, ಬಹಳಷ್ಟು ನೀರಿಕ್ಷೆ ಇಡಲಾಗಿದೆ. ಬಹುಮತ ಅಂತರದಿಂದ ಗೆಲ್ಲಲು ಮತದಾರರು ಕೈ ಹಿಡಿಯಬೇಕು. ಈ ಕ್ಷೇತ್ರದಿಂದ ಆಯ್ಕೆಯಾಗಿ ಲೋಕಸಭಾ ಪ್ರವೇಶ ಮಾಡಿದರೆ ಮಹಿಳಾ ಸಂಘಟನೆ ಸೇರಿದಂತೆ ಅಭಿವೃದ್ಧಿ ಕಾರ್ಯಗಳಿಗೆ ಒತ್ತು ನೀಡಲಾಗುವುದು ಎಂದು ಭರವಸೆ ನೀಡಿದರು.

ಮುಚ್ಚಂಡಿಯಲ್ಲಿ ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಅವರು ಮಾತನಾಡಿ, ನಮ್ಮ ಮನೆ ಮಗಳಾದ ನನಗೆ ನಮ್ಮ ಸೇವೆ ಮಾಡುವ ಅವಕಾಶ ಒದಗಿ ಬಂದಿದೆ. ಚುನಾವಣೆಯಲ್ಲಿ ಗೆಲ್ಲಿಸುವ ಜವಾಬ್ದಾರಿ ನಮ್ಮ ಮೇಲಿದೆ. ಆಯ್ಕೆ ಬಳಿಕ ಚಿಕ್ಕೋಡಿ ಲೋಕಸಭಾ ಕ್ಷೇತ್ರ ಅಭಿವೃದ್ಧಿ ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು. ನಮ್ಮೆಲ್ಲರ ಆಶೀರ್ವಾದಿಂದ ತಂದೆಯವರಾದ ಸತೀಶ ಜಾರಕಿಹೊಳಿ ಅವರು ಜಿಲ್ಲಾ ಉಸ್ತುವಾರಿ ಸಚಿವರಾಗಿದ್ದಾರೆ. ಜನಸೇವೆ ಮೆಚ್ಚಿ ಮತದಾರರ ಅವರನ್ನು ಆಯ್ಕೆ ಮಾಡಿದ್ದಾರೆ, ಈ ಸಲ ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿಯಾಗಿ ಕಣಕ್ಕೆ ಇಳಿಯಲಾಗಿದೆ. ಮತದಾರರು ಗೆಲುವಿಗೆ ಕೈ ಜೋಡಿಸಿದರೆ ಹಗಲಿರುಳು ನಮ್ಮ ಸೇವೆ ಮಾಡಲಾಗುವುದು ಎಂದು ಹೇಳಿದರು.

"ಕೈ" ಗೆ ಶಕ್ತಿ ತುಂಬಿ ಪ್ರಿಯಂಕಾ: ರೈತರು, ಕೂಲಿ ಕಾರ್ಮಿಕರು, ಬಡವರು, ಮಧ್ಯಮ ವರ್ಗದವರು ಸೇರಿದಂತೆ ಎಲ್ಲರೂ ನೆಮ್ಮದಿಯಿಂದ ಬದುಕು ಸಾಗಿಸಲು ಕಾಂಗ್ರೆಸ್ ಅಧಿಕಾರಿಕ್ಕೆ ಬರಬೇಕಾಗಿದೆ. ಕೆಳ ವರ್ಗದ ಜನರು ಅಭಿವೃದ್ಧಿ ಹೊಂದ ಬೇಕಾಗಿದೆ. (2 ನೇ ಪುಟಕ್ಕೆ)

## ಬೆಳಗಾವಿಯಲ್ಲಿ ಬಿಜೆಪಿ ಮೂರ್ನಾಲ್ಕು ಲಕ್ಷ ಮತಗಳ ಅಂತರದಲ್ಲಿ ಗೆಲ್ಲುತ್ತದೆ : ಬಿ ಎಸ್ ಯಡಿಯೂರಪ್ಪ

### ಬೆಳಗಾವಿಯಲ್ಲೇ ಮನೆ ಮಾಡುವೆ, ಬೆಳಗಾವಿ ಜನರ ಸಮಸ್ಯೆಗೆ ಸ್ಪಂದಿಸುವೆ: ಜಗದೀಶ್ ಶೆಟ್ಟರ್ ನೊಂದ ಮಾತು



ಬೆಳಗಾವಿ : ಬುಧವಾರ ಬೆಳಗಾವಿ ನಗರದ ತುಂಬಾ ಬಿಜೆಪಿಯ ಪರವಾದ ಕೂಗು, ಹರ್ಶೋದ್ಗಾರ, ಘೋಷಣೆಗಳು ಮೊಳಗಿ ಇಡೀ ನಗರವೇ ಜೈ ಶ್ರೀರಾಮ್, ಜೈ ಬಿಜೆಪಿ, ಜೈ ಮೋದಿಜಿ ಎಂದು ಕೆಸರಿಮಯ ವಾತಾವರಣ ನಿರ್ಮಾಣವಾಗಿತ್ತು. ನಗರದ ಚೆನ್ನಮ್ಮ ವೃತದ ರಾಣಿ ಚನ್ನಮ್ಮ ಪ್ರತಿಮೆಗೆ ಮಾಲಾರ್ಪಣೆ ಮಾಡಿದ ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಅವರು, ನಂತರ ನೆರೆದ ಕಾರ್ಯಕರ್ತರನ್ನು ಉದ್ದೇಶಿಸಿ ಮಾತನಾಡುತ್ತಾ, ನಮ್ಮ ನಾಯಕರಾದ ಯಡಿಯೂರಪ್ಪ ಅವರ ಮಾರ್ಗದರ್ಶನದಲ್ಲಿ ನಾವಿಂದು ಎಲ್ಲರೂ ಒಗ್ಗಟ್ಟಾಗಿ ಸೇರಿ ಬಿಜೆಪಿ ಪಕ್ಷವನ್ನು ಗೆಲ್ಲಿಸುವ ಗುರಿ ಹೊಂದಿದ್ದೇವೆ ಎಂದರು.

ಬೆಳಗಾವಿ ನನ್ನ ಉರು ಇದ್ದಂಗೆ, ನಾನು ಕೂಡಾ ಇಲ್ಲೇ ಮನೆ ಮಾಡಿ ಇರುವೆ, ಬೆಳಗಾವಿ ಜನರ ಯಾವುದೇ ಸಮಸ್ಯೆ ಇದ್ದರೂ ನಾನು ಸ್ಪಂದನೆ ನೀಡಿ, ಪರಿಹರಿಸುತ್ತೇವೆ, ಬೆಳಗಾವಿಯ ಸಕಲ ಅಭಿವೃದ್ದಿ ಮಾಡುವ ಪ್ರಾಮಾಣಿಕ ಪ್ರಯತ್ನ ಮಾಡುವೆ ಎಂದರು..

ಸಾವಿರಾರು ಸಂಖ್ಯೆಯಲ್ಲಿ ಬಿಜೆಪಿ ಕಾರ್ಯಕರ್ತರು ಸೇರಿಕೊಂಡು ಬೈಕ್ ರ್ಯಾಲಿ ಮೂಲಕ ನನ್ನನ್ನು ಸ್ವಾಗತ ಮಾಡಿದ್ದನ್ನು ನೋಡಿದರೆ, ಈ ಸಲ ಬಿಜೆಪಿ ಪಕ್ಷ ಮೂರ್ನಾಲ್ಕು ಲಕ್ಷ ಲೀಡನಲ್ಲಿ ಗೆದ್ದು ಬರುವದು ಗ್ಯಾರೆಂಟಿ ಎಂಬ ವಿಶ್ವಾಸ ವ್ಯಕ್ತಪಡಿಸಿದ್ದಾರೆ..

ಒಟ್ಟಿನಲ್ಲಿ ಬೆಳಗಾವಿ ಬಿಜೆಪಿಯಲ್ಲಿ ಒಗ್ಗಟ್ಟಿನ ಮಂತ್ರ ಜಪಿಸಿದ್ದು, ಈ ಪ್ರಚಾರದ ಬೈಕ್ ರ್ಯಾಲಿಯಲ್ಲಿ ರಾಜ್ಯ ಹಾಗೂ ಜಿಲ್ಲಾ ಮಟ್ಟದಲ್ಲಿ ಎಲ್ಲಾ ಪದಾಧಿಕಾರಿಗಳು, ಸಾವಿರಾರು ಕಾರ್ಯಕರ್ತರು ಒಟ್ಟಿಗೆ ಸೇರಿ ಸಂಭ್ರಮಿಸುತ್ತಾ, ಬಿಜೆಪಿ ಜಯಭೇರಿ ಬಾರಿಸುವ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

### ಯುವಕರು ಬೈಕ್ ರ್ಯಾಲಿ ಮೂಲಕ ಜಗದೀಶ ಶೆಟ್ಟರಗೆ ಸ್ವಾಗತ

ಬೆಳಗಾವಿ: ಬೆಳಗಾವಿ ಬಿಜೆಪಿ ಅಭ್ಯರ್ಥಿ ಜಗದೀಶ ಶೆಟ್ಟರ್ ಅವರನ್ನು 16 ಸಾವಿರ ಯುವಕರು ಬೈಕ್ ರ್ಯಾಲಿ ಮೂಲಕ ಸ್ವಾಗತಿಸಿದ ಬೃಹತ್ ಸಮಾರಂಭದಲ್ಲಿ ವಿಶ್ವಾಸ ವ್ಯಕ್ತಪಡಿಸಿದರು. ಬೆಂಬಲ ನೀಡಿದ ಎಲ್ಲರಿಗೂ ಧನ್ಯವಾದ ಹೇಳಿದ ಅವರು, ಅವರ ಗೌರವ ಬಿಜೆಪಿ ಗೆಲ್ಲುತ್ತದೆ ಎಂಬುದನ್ನು ತೋರಿಸುತ್ತದೆ ಎಂದರು. ಕಾಂಗ್ರೆಸ್‌ಗೆ ಹೇಳಲು ಮುಖ್ಯ ವಾದದ್ದೇನೂ ಇಲ್ಲ ಎಂದು ಶೆಟ್ಟರ್ ಟೀಕಿಸಿದರು. ಅವರು ಮೋದಿ ಬಗ್ಗೆ ಮಾತನಾಡುತ್ತಾರೆ ಆದರೆ ನಿಜವಾದ ವಿಷಯಗಳತ್ತ ಗಮನ ಹರಿಸು ವುದಿಲ್ಲ ಎಂದು ಹೇಳಿದರು. ಅವರು ಬೆಳಗಾವಿಯಲ್ಲಿ ಬಹಳ ಸಮಯದಿಂದ ಕೆಲಸ ಮಾಡುತ್ತಿರುವುದರಿಂದ ಅವರು ಹೊರಗಿನವರಲ್ಲ ಎಂದು ಹೇಳಿದರು. ಶೆಟ್ಟರ್ ಅವರು ಬೆಳಗಾವಿ ಯಲ್ಲಿ ಮೂಲಭೂತ ಸೌಕರ್ಯಗಳ



ನಿರ್ಮಾಣದಂತಹ ಕೆಲಸಗಳ ಬಗ್ಗೆ ಮಾತನಾಡಿದರು.

ಚುನಾವಣೆಯಲ್ಲಿ ಬಿಜೆಪಿ ಹೆಚ್ಚಿನ ಅಂತರದಿಂದ ಗೆಲ್ಲುತ್ತದೆ ಎಂದು ಅವರು ನಂಬಿದ್ದಾರೆ. ಶೆಟ್ಟರ್ ಅವರ ಭಾಷಣವು ಬೆಳಗಾವಿಯಲ್ಲಿ ಬಿಜೆಪಿ ಗೆಲ್ಲುವ ಸಂಕಲ್ಪವನ್ನು ತೋರಿಸುತ್ತದೆ ಮತ್ತು ಇದು ರೋಚಕ ಚುನಾವಣಾ ಕದನಕ್ಕೆ ವೇದಿಕೆಯನ್ನು ಸಿದ್ಧಪಡಿಸುತ್ತದೆ.